# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | : | 1893 |
| ಸದಸ್ಯರ ಹೆಸರು | : | ಶ್ರೀ ಚಿದಾನಂದ್ ಎಂ. ಗೌಡ<br>(ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 24.03.2026 |
| ಉತ್ತರಿಸುವ ಸಚಿವರು | : | ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು. |

<table>
<tr><th>ಕ್ರ.ಸಂ.</th><th>ಪ್ರಶ್ನೆಗಳು</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳು ಎಷ್ಟು; ರಾಜ್ಯದ ಆದಾಯದಲ್ಲಿ ಇವುಗಳ ಪ್ರಮಾಣ ಎಷ್ಟು;</td><td>ರಾಜ್ಯದಲ್ಲಿ ಜುಲೈ 2020 ರಿಂದ ಎಂ.ಎಸ್.ಎಂ.ಇ ಉದ್ಯಮಗಳ ನೊಂದಣಿಯನ್ನು ಭಾರತ ಸರ್ಕಾರದ ಉದ್ಯಮ್ ತಂತ್ರಾಂಶದಲ್ಲಿ ಮಾಡಲಾಗುತ್ತಿದ್ದು, ರಾಜ್ಯದಲ್ಲಿ ಜುಲೈ-2020 ರಿಂದ ಫೆಬ್ರುವರಿ-2026ರ ಅಂತ್ಯದವರೆಗೆ ನೋಂದಣಿಯಾಗಿರುವ ಎಂ.ಎಸ್.ಎಂ.ಇಗಳ ಸಂಖ್ಯೆ ಕೆಳಕಂಡಂತಿದೆ,<br><br><table><tr><th>ಸೂಕ್ಷ್ಮ</th><th>ಸಣ್ಣ</th><th>ಮಧ್ಯಮ</th><th>ಒಟ್ಟು ನೋಂದಣಿಯಾದ ಘಟಕಗಳು</th></tr><tr><td>2563964</td><td>31700</td><td>2311</td><td>2597975</td></tr></table><br>ಭಾರತ ಸರ್ಕಾರದ ಉದ್ಯಮ್ ತಂತ್ರಾಂಶದಲ್ಲಿ ಘಟಕಗಳ ನೋಂದಣಿ ಮಾಡುವ ಅವಕಾಶ ಕಲ್ಪಿಸಲಾಗಿದ್ದು, ಘಟಕಗಳ ಆದಾಯದ ಕುರಿತು ಮಾಹಿತಿ ಪಡೆಯುವ ವ್ಯವಸ್ಥೆ ಇಲ್ಲದಿರುವುದರಿಂದ ಆದಾಯದ ಮಾಹಿತಿ ಇರುವುದಿಲ್ಲ.</td></tr>
<tr><td>ಆ)</td><td>ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರ ಸಂಖ್ಯೆ ಎಷ್ಟು;</td><td>ಉದ್ಯಮ್ ತಂತ್ರಾಂಶದನ್ವಯ ಜುಲೈ 2020 ರಿಂದ ಫೆಬ್ರುವರಿ 2026ರ ಅಂತ್ಯದವರೆಗೆ ನೋಂದಣಿಯಾಗಿರುವ ಎಂ.ಎಸ್.ಎಂ.ಇಗಳಿಂದ ಸೃಜನೆಯಾದ ಉದ್ಯೋಗಗಳ ಮಾಹಿತಿ ಈ ಕೆಳಕಂಡಂತಿದೆ:<br><br><table><tr><th>ಸೂಕ್ಷ್ಮ</th><th>ಸಣ್ಣ</th><th>ಮಧ್ಯಮ</th><th>ಒಟ್ಟು</th></tr><tr><td>22713130</td><td>1206384</td><td>437414</td><td>243.56 ಲಕ್ಷ</td></tr></table></td></tr>
<tr><td>ಇ)</td><td>ರಾಜ್ಯದಲ್ಲಿ ಕಳೆದ ಮೂರು ವರ್ಷದಲ್ಲಿ ನೋಂದಣಿಯಾದ ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳು ಎಷ್ಟು; (ವರ್ಷವಾರು,ಜಿಲ್ಲಾವಾರು ವಿವರ ನೀಡುವುದು)</td><td>ರಾಜ್ಯದಲ್ಲಿ ಜುಲೈ 2020 ರಿಂದ ಎಂ.ಎಸ್.ಎಂ.ಇ ಉದ್ಯಮಗಳ ನೋಂದಣಿಯನ್ನು ಭಾರತ ಸರ್ಕಾರದ ಉದ್ಯಮ್ ತಂತ್ರಾಂಶದಲ್ಲಿ ಮಾಡಲಾಗುತ್ತಿದ್ದು, ರಾಜ್ಯದಲ್ಲಿ ಕಳೆದ 3 ವರ್ಷದಲ್ಲಿ ನೋಂದಣಿಯಾದ ವರ್ಷವಾರು, ಜಿಲ್ಲಾವಾರು ವಿವರಗಳನ್ನು ಅನುಬಂಧ-1 ರಲ್ಲಿ ನೀಡಲಾಗಿದೆ.</td></tr>
<tr><td>ಈ)</td><td>ವಿದ್ಯುತ್ ಸಂಪರ್ಕಕ್ಕೆ ಒ.ಸಿ ಮತ್ತು ಸಿ.ಸಿ ಕಡ್ಡಾಯ ಮಾಡಿದ ನಂತರ ಹೊಸದಾಗಿ ಪ್ರಾರಂಭ ಮಾಡುವ ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳು ವಿದ್ಯುತ್ ಸಂಪರ್ಕವಿಲ್ಲದೆ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದರ ಪರಿಹಾರಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;</td><td>ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತದಿಂದ ಹಂಚಿಕೆಯಾದ ನಿವೇಶನ/ಮಳಿಗೆಗಳಿಗೆ ನಿಯಮಾನುಸಾರ ನಿಗಮದಿಂದ ಕಟ್ಟಡ ನಿರ್ಮಾಣದ ನೀಲಿ ನಕ್ಷೆ ಅನುಮೋದನೆಯನ್ನು ಮಂಜೂರು ಪಡೆದು ಕಟ್ಟಡ ನಿರ್ಮಿಸುವ ಕೈಗಾರಿಕೆಗಳಿಗೆ ನಿಗಮದಿಂದ ಕಟ್ಟಡ ನಿರ್ಮಾಣದ ನೀಲಿ ನಕ್ಷೆ ಅನುಮೋದನೆಯಂತೆ ಸ್ವಾಧೀನಾನುಭವ ಪ್ರಮಾಣ ಪತ್ರ (ಒಸಿ) ನೀಡಲಾಗುತ್ತಿದೆ. ಒಸಿ ಪಡೆದ ನಂತರ ಉದ್ದಿಮೆದಾರರು ನಿಯಮಾನುಸಾರ ವಿದ್ಯುತ್ ಸಂಪರ್ಕ ಪಡೆಯುತ್ತಿದ್ದಾರೆ.</td></tr>
</table>

| | | |
|---|---|---|
| ಉ) | 1200 ಚದರ ಅಡಿಯ ಮನೆಗಳಿಗೆ ಒ.ಸಿ ಮತ್ತು ಸಿ.ಸಿ ಯಿಂದ ವಿನಾಯಿತಿ ನೀಡಿದಂತೆ ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳಿಗೆ ವಿನಾಯಿತಿ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಇಂಧನ ಇಲಾಖೆಯು ಮಾನ್ಯ ಸರ್ವೋಚ್ಚ ನ್ಯಾಯಾಲಯ ಸಿವಿಲ್ ಅಪೀಲು ಸಂಖ್ಯೆ: 14604/2024 ಹಾಗೂ ಸಿವಿಲ್ ಅಪೀಲು ಸಂಖ್ಯೆ: 14605/2024ರ ಪ್ರಕರಣದಲ್ಲಿ ದಿನಾಂಕ: 17.12.2024 ರಂದು ನೀಡಿರುವ ತೀರ್ಪಿನಲ್ಲಿ ಕಟ್ಟಡಗಳಿಗೆ ಶಾಶ್ವತ ವಿದ್ಯುತ್ ಸಂಪರ್ಕ ನೀಡುವಾಗ ಸಕ್ಷಮ/ಸ್ಥಳೀಯ ಪ್ರಾಧಿಕಾರದಿಂದ ನೀಡುವ ವಾಸಯೋಗ್ಯ/ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಆಧರಿಸಿ ಸಂಪರ್ಕ ನೀಡಲಾಗುತ್ತಿದೆ.<br><br>ಮುಂದುವರೆದು, ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಸಂಬಂಧಿಸಿದಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯ ಸಿವಿಲ್ ಅಪೀಲು ಸಂಖ್ಯೆ: 14604/2024 ಹಾಗೂ ಸಿವಿಲ್ ಅಪೀಲು ಸಂಖ್ಯೆ: 14605/2024ರ ಪ್ರಕರಣದಲ್ಲಿ ದಿನಾಂಕ: 17.12.2024 ರಂದು ನೀಡಿರುವ ತೀರ್ಪಿನ ಹಿನ್ನೆಲೆಯಲ್ಲಿ ಗ್ರಾಮೀಣಾಭಿವೃದ್ಧಿ ಸಂಖ್ಯೆ: RDPR/27/GPA/2025, ದಿನಾಂಕ: 13.05.2025 ರಂದು ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ. (**ಅನುಬಂಧ-2** ರಲ್ಲಿ ನೀಡಲಾಗಿದೆ.)<br><br>ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದಿಂದ ಸಂಖ್ಯೆ: ಕಪಂರಾಆ ಅಭಿವೃದ್ಧಿ/9/2025, ದಿನಾಂಕ: 23.05.2025 ರಂದು ಎಸ್ಕಾಂ ಗಳಿಂದ ವಿದ್ಯುತ್ ಸಂಪರ್ಕ ನೀಡಲು ಬಾಕಿ ಇರುವ ಅರ್ಜಿಗಳಿಗೆ ವಾಸಯೋಗ್ಯ (Occupancy Certificate) ಪ್ರಮಾಣ ಪತ್ರಗಳನ್ನು ನಿಯಮಾನುಸಾರ ಒದಗಿಸುವ ಬಗ್ಗೆ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.<br><br>ಸುತ್ತೋಲೆ ಸಂಖ್ಯೆ: ನಅಇ 136 ಬಿಎಂಆರ್ 2024 ದಿನಾಂಕ: 05.08.2024 ರಂದು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಕಟ್ಟಡಗಳ ನಿರ್ಮಾಣಗಳಿಗೆ ಸ್ವಾಧೀನ ಪ್ರಮಾಣ ಪತ್ರ (Occupancy Certificate) ವಿತರಣೆ ಮಾಡುವ ಬಗ್ಗೆ ನಗರಾಭಿವೃದ್ಧಿ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಗಳಿಂದ ಜಂಟಿಯಾಗಿ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ. (**ಅನುಬಂಧ-3** ರಲ್ಲಿ ಲಗತ್ತಿಸಿದೆ.) |

ಸಿಐ 106 ಸಿಎಸ್‌ಸಿ 2026

**(ಶರಣಬಸಪ್ಪ ದರ್ಶನಾಪೂರ)**
ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ
ಸಚಿವರು.

ಮಾನ್ಯ ಶ್ರೀ ಚಿದಾನಂದ್ ಎಂ ಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) ರವರ LCQ 1673 (1893) ಅನುಬಂಧ – 01

| DISTRICTS | 2022-23 | | | | 2023-24 | | | | 2024-25 | | | |
|---|---|---|---|---|---|---|---|---|---|---|---|---|
| | Medium | Micro | Small | Grand Total | Medium | Micro | Small | Grand Total | Medium | Micro | Small | Grand Total |
| BAGALKOT | 4 | 9033 | 99 | 9136 | | 14480 | 46 | 14526 | 1 | 14438 | 26 | 14465 |
| BALLARI | 11 | 10951 | 199 | 11161 | 2 | 11158 | 99 | 11259 | 2 | 12699 | 35 | 12736 |
| BELAGAVI | 8 | 29440 | 246 | 29694 | 8 | 39079 | 143 | 39230 | 9 | 40156 | 97 | 40262 |
| BENGALURU (RURAL) | 14 | 20406 | 259 | 20679 | 9 | 23157 | 127 | 23293 | 6 | 26151 | 67 | 26224 |
| BENGALURU (URBAN) | 155 | 98176 | 2171 | 100502 | 81 | 120752 | 1509 | 122342 | 62 | 144321 | 924 | 145307 |
| BIDAR | 5 | 8951 | 100 | 9056 | 5 | 8983 | 52 | 9040 | 2 | 11267 | 27 | 11296 |
| CHAMARAJNAGAR | 1 | 4553 | 50 | 4604 | | 5817 | 16 | 5833 | | 7411 | 13 | 7424 |
| CHIKBALLAPUR | 1 | 7364 | 84 | 7449 | 3 | 9011 | 40 | 9054 | 1 | 12123 | 30 | 12154 |
| CHIKKAMAGALURU | 2 | 7326 | 95 | 7423 | 2 | 7890 | 47 | 7939 | 1 | 9924 | 35 | 9960 |
| CHITRADURGA | 5 | 7267 | 71 | 7343 | | 9104 | 47 | 9151 | 2 | 14448 | 41 | 14491 |
| DAKSHIN KANNAD | 4 | 17910 | 224 | 18138 | 8 | 19269 | 119 | 19396 | 7 | 21241 | 82 | 21330 |
| DAVANGERE | 2 | 9518 | 142 | 9662 | 4 | 12988 | 67 | 13059 | 6 | 18614 | 62 | 18682 |
| DHARWAD | 3 | 16821 | 179 | 17003 | 4 | 19239 | 98 | 19341 | 2 | 19973 | 52 | 20027 |
| GADAG | | 5405 | 56 | 5461 | | 8356 | 27 | 8383 | 1 | 8458 | 22 | 8481 |
| HASSAN | 4 | 11067 | 157 | 11228 | 9 | 14031 | 117 | 14157 | 5 | 16014 | 82 | 16101 |
| HAVERI | 3 | 8153 | 89 | 8245 | 1 | 11865 | 62 | 11928 | 1 | 14660 | 32 | 14693 |
| KALABURAGI | 2 | 9566 | 160 | 9728 | | 12330 | 78 | 12408 | 4 | 15544 | 54 | 15602 |
| KODAGU | 3 | 3607 | 64 | 3674 | 1 | 4000 | 33 | 4034 | 4 | 5109 | 22 | 5135 |
| KOLAR | 10 | 7384 | 113 | 7507 | 3 | 10570 | 56 | 10629 | 3 | 14963 | 49 | 15015 |
| KOPPAL | | 5469 | 127 | 5596 | | 6920 | 47 | 6967 | | 9868 | 44 | 9912 |
| MANDYA | 2 | 8940 | 99 | 9041 | 1 | 12399 | 49 | 12449 | 2 | 16196 | 43 | 16241 |
| MYSURU | 5 | 22198 | 256 | 22459 | 4 | 30366 | 150 | 30520 | 2 | 35260 | 99 | 35361 |
| RAICHUR | 2 | 8429 | 167 | 8598 | 1 | 8359 | 71 | 8431 | 4 | 11193 | 38 | 11235 |
| BANGALORE SOUTH | | 6257 | 71 | 6328 | 2 | 10575 | 39 | 10616 | 2 | 12584 | 21 | 12607 |
| SHIVAMOGGA | 4 | 13336 | 152 | 13492 | 4 | 14376 | 62 | 14442 | 1 | 16847 | 38 | 16886 |
| TUMAKURU | 2 | 15480 | 190 | 15672 | 2 | 18748 | 87 | 18837 | 1 | 26736 | 79 | 26816 |
| UDUPI | 4 | 11689 | 102 | 11795 | 3 | 12464 | 69 | 12536 | 3 | 12835 | 34 | 12872 |
| UTTAR KANNAD | | 11402 | 98 | 11500 | 1 | 12004 | 34 | 12039 | | 12776 | 21 | 12797 |
| VIJAYANAGAR | 1 | 3061 | 62 | 3124 | | 5002 | 37 | 5039 | | 8102 | 22 | 8124 |
| VIJAYAPURA | 9 | 10730 | 156 | 10895 | 2 | 12795 | 69 | 12866 | 1 | 15635 | 64 | 15700 |
| YADGIR | 2 | 4638 | 67 | 4707 | 1 | 4412 | 29 | 4442 | 1 | 6274 | 25 | 6300 |
| **Grand Total** | **268** | **414527** | **6105** | **420900** | **161** | **510499** | **3526** | **514186** | **136** | **611820** | **2280** | **614236** |

ಅನುಬಂಧ-೨

**ಕರ್ನಾಟಕ ಸರ್ಕಾರ**

ಸಂಖ್ಯೆ: RDPR/27/GPA/2025

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:13-05-2025.

**ಸುತ್ತೋಲೆ**

**"ಸರ್ವೋಚ್ಚ ನ್ಯಾಯಾಲಯ ಪ್ರಕರಣ"**

**ವಿಷಯ:** ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಅನಧಿಕೃತ ಹಾಗೂ ನಿಯಮಗಳನ್ನು ಉಲ್ಲಂಘಿಸಿ, ನಿರ್ಮಾಣವಾಗುತ್ತಿರುವ ವಸತಿ, ವಾಣಿಜ್ಯ, ಇತರೆ ಕಟ್ಟಡಗಳ ಕಾಮಗಾರಿಗಳನ್ನು ನಿರ್ಬಂಧಿಸುವುದು ಹಾಗೂ ಸಾರ್ವಜನಿಕ ಆಸ್ತಿಯ ಮೇಲೆ ನಿರ್ಮಿಸಿರುವ ಕಟ್ಟಡಗಳನ್ನು ನೆಲ ಸಮಗೊಳಿಸುವ ಬಗ್ಗೆ.

**ಉಲ್ಲೇಖ:**
1. ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ರವರ ಟಿಪ್ಪಣಿ ಸಂಖ್ಯೆ:ಮುಕಾ/9329237/2025, ದಿನಾಂಕ:20-01-2025.
2. ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಿವಿಲ್ ಅಪೀಲು ಸಂಖ್ಯೆ:14604/2024 (Arising out of SLP (C) No. 36440 of 2014) ಹಾಗೂ ಸಿವಿಲ್ ಅಫೀಲು ಸಂಖ್ಯೆ: 14605/2024 (Arising out of SLP (C) No. 1184 of 2015) ರ ಪ್ರಕರಣದಲ್ಲಿ ದಿನಾಂಕ: 17-12-2024 ರಂದು ನೀಡಿರುವ ತೀರ್ಪಿನಲ್ಲಿನ ಮಾರ್ಗಸೂಚಿಗಳು.
3. ಕರ್ನಾಟಕ ಪಂಚಾಯತ್ ರಾಜ್ (ಒತ್ತುವರಿಗಳನ್ನು ತೆರವುಗೊಳಿಸುವ) ನಿಯಮಗಳು 2011.
4. ನಗರಾಭಿವೃದ್ಧಿ ಇಲಾಖೆ ರವರ ಸುತ್ತೋಲೆ ಸಂಖ್ಯೆ: ನಅಇ 136 ಬಿಎಂಆರ್ 2024, ದಿನಾಂಕ:05-08-2024.

*****

**1.** ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಉಲ್ಲೇಖಿತ (1)ರ ಟಿಪ್ಪಣಿಯೊಡನೆ ಲಗತ್ತಿಸಿರುವ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಉಲ್ಲೇಖ (2) ರಲ್ಲಿನ ತೀರ್ಪಿನಲ್ಲಿ, ಅನಧಿಕೃತವಾಗಿ ನಿರ್ಮಿಸುತ್ತಿರುವ ಹಾಗೂ ಕಟ್ಟಡ ನಿರ್ಮಾಣದ ನಿಯಮಗಳನ್ನು ಉಲ್ಲಂಘಿಸಿ, ನಿರ್ಮಿಸುತ್ತಿರುವ ಕಟ್ಟಡ ಕಾಮಗಾರಿಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಹಾಗೂ ಸರ್ಕಾರದ ಮತ್ತು ಸಾರ್ವಜನಿಕ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ /ನಿರ್ಮಿಸಿರುವ ಅಕ್ರಮ ಕಟ್ಟಡಗಳನ್ನು ನೆಲಸಮ ಮಾಡುವ ಮುನ್ನ ಸ್ಥಳೀಯ ಪ್ರಾಧಿಕಾರಗಳು ನಿಯಮಾನುಸಾರ ಅನುಸರಿಸಬೇಕಾದ ಕಾರ್ಯವಿಧಾನಗಳ ಬಗ್ಗೆ ನಿರ್ದೇಶನಗಳನ್ನು ನೀಡಿರುವುದನ್ನು ಪ್ರಸ್ತಾಪಿಸಲಾಗಿರುತ್ತದೆ. ಅಕ್ರಮವಾಗಿ ನಿರ್ಮಿಸಿರುವ ಕಟ್ಟಡಗಳನ್ನು ತೆರವುಗೊಳಿಸುವ ಬಗ್ಗೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು ರಾಜ್ಯ ಸರ್ಕಾರಗಳಿಗೆ ನೀಡಿರುವ ನಿರ್ದೇಶನಗಳನ್ನು ಸ್ಥಳೀಯ ಪ್ರಾಧಿಕಾರಗಳು ಮತ್ತು ಇಲಾಖೆಗಳು ಪಾಲಿಸಲು ಸೂಕ್ತ ನಿರ್ದೇಶನ ನೀಡುವಂತೆ ಸದರಿ

ಆದೇಶದಲ್ಲಿ ಸರ್ಕಾರಕ್ಕೆ ಸೂಚಿಸಿರುತ್ತದೆ ಆದುದರಿಂದ ಅಕ್ರಮ ಕಟ್ಟಡಗಳ ತೆರವುಗೊಳಿಸುವ ಕಾರ್ಯಾಚರಣೆಯಲ್ಲಿ ಈ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಅನುಸರಿಸುವಂತೆ ಈ ಮೂಲಕ ನಿರ್ದೇಶನ ನೀಡಲಾಗಿದೆ. ಈ ಹಿಂದೆಯೇ ಸಹ ಪಂಚಾಯತಿಯ ಸ್ವತ್ತುಗಳ ಮೇಲಿನ ಅಕ್ರಮ ಕಟ್ಟಡ ಮತ್ತು ಚರಂಡಿ ಕಾಲುವೆಗಳ ಮೇಲಿನ ಅಡತಡೆಗಳನ್ನು ತೆರವುಗೊಳಿಸಲು ಈಗಾಗಲೇ ಉಲ್ಲೇಖ(3) ರಲ್ಲಿನ ನಿಯಮಗಳನ್ನು ಜಾರಿಗೊಳಿಸಲಾಗಿರುತ್ತದೆ. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನಿರ್ಮಿಸಿರುವ ಕಟ್ಟಡಗಳು ಅನುಮೋದಿತ ನಕಾಶೆಯನುಸಾರ ಕಟ್ಟಿರುವ ಬಗ್ಗೆ ಹಾಗೂ ಅದು ವಾಸ ಯೋಗ್ಯ ಎಂದು ದೃಢೀಕರಿಸುವ ಸಂಬಂಧ ಉಲ್ಲೇಖ (4) ರಲ್ಲಿನ ಸುತ್ತೋಲೆಯಲ್ಲಿ ತಿಳಿಸಲಾಗಿದೆ.

2. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 64 ರಲ್ಲಿ ಕಟ್ಟಡ ನಿರ್ಮಾಣ ಹಾಗೂ ನಿಯಂತ್ರಣದ ಬಗ್ಗೆ ಉಪಬಂಧವಿರುತ್ತದೆ. ಕಟ್ಟಡಗಳನ್ನು ನಿರ್ಮಿಸಲು ಸರ್ಕಾರ ಗೊತ್ತುಪಡಿಸಬಹುದಾದ ನಿಯಮಗಳಿಗೊಳಪಟ್ಟು ಸ್ಥಳೀಯ ಗ್ರಾಮ ಪಂಚಾಯತಿಯಿಂದ ಪರವಾನಿಗೆ ಪಡೆಯಬೇಕಾಗಿರುತ್ತದೆ. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕಟ್ಟಡಗಳನ್ನು ನಿರ್ಮಿಸಲು ಅನುಸರಿಸಬೇಕಾದ ವಿಧಿವಿಧಾನಗಳನ್ನು ರಾಜ್ಯ ಸರ್ಕಾರ ಮಾದರಿ ಉಪ ವಿಧಿಗಳು ಅಂದರೆ 'ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಕಟ್ಟಡಗಳ ನಿರ್ಮಾಣದ ಮೇಲೆ ಜಿಲ್ಲಾ ಪಂಚಾಯತ್‌ಗಳ ತಾಲ್ಲೂಕು ಪಂಚಾಯತ್‌ಗಳ ಮತ್ತು ಗ್ರಾಮ ಪಂಚಾಯತ್‌ಗಳ ನಿಯಂತ್ರಣ) ಮಾದರಿ ಉಪವಿಧಿ 2015 ನ್ನು ಜಾರಿಗೊಳಿಸಿದೆ. ಗ್ರಾಮಠಾಣಾ ವ್ಯಾಪ್ತಿಯನ್ನು ಹೊರತುಪಡಿಸಿ ಹೊಸದಾಗಿ ಭೂ ಅಭಿವೃದ್ಧಿಗೊಳಿಸಿರುವ ಲೇ ಔಟ್‌ಗಳಲ್ಲಿ ಕಟ್ಟಡ ನಿರ್ಮಿಸಲು ಪರವಾನಿಗೆ ನೀಡುವ ಮುನ್ನ ಸದರಿ ಕಟ್ಟಡ ಕಟ್ಟುವ ನಿವೇಶನಗಳನ್ನು ಕ್ರಮಬದ್ಧವಾಗಿ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಅಧಿನಿಯಮ, 1961 ರ ಉಪಬಂಧಗಳು ಹಾಗೂ ಅದರಡಿ ರಚಿಸಿರುವ ನಿಯಮಗಳ ಅನುಸಾರ ಅಭಿವೃದ್ಧಿಪಡಿಸಿರುವುದನ್ನು ಗ್ರಾಮ ಪಂಚಾಯತಿ ಖಾತರಿಪಡಿಸಿಕೊಳ್ಳಬೇಕಾಗಿರುತ್ತದೆ.

3. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಿರ್ಮಾಣ ಮಾಡುವ ಕಟ್ಟಡಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ಅಂಶಗಳನ್ನು ಪಾಲಿಸಲು ಸೂಚಿಸಿದೆ.

1. ಗ್ರಾಮ ಪಂಚಾಯಿತಿ ಪರವಾನಿಗೆ ಪಡೆದು ಕಟ್ಟಡ ಯೋಜನೆ ಹಾಗೂ ಅನುಮೋದಿತ ನಕ್ಷೆ ಉಲ್ಲಂಘನೆಯಾಗದಂತೆ ನಿರ್ಮಿಸಿರುವ ಕಟ್ಟಡಗಳನ್ನು ಸ್ಥಳ ಪರಿಶೀಲಿಸಿ, ತಡ ಮಾಡದೆ ಪೂರ್ಣಗೊಂಡ ಪತ್ರ/ವಾಸಯೋಗ್ಯ ಪ್ರಮಾಣ ಪತ್ರವನ್ನು ನೀಡತಕ್ಕದ್ದು. ಗ್ರಾಮ ಪಂಚಾಯತಿ ಪರವಾನಿಗೆ ಪಡೆಯದ ಹಾಗೂ ಪರವಾನಿಗೆ ಪಡೆದಿದ್ದರೂ ಕಟ್ಟಡ ನಿರ್ಮಾಣದ ನಿಯಮಗಳನ್ನು ಉಲ್ಲಂಘಿಸಿ, ನಿರ್ಮಾಣವಾಗುತ್ತಿರುವ ವಸತಿ, ವಾಣಿಜ್ಯ ಹಾಗೂ ಇತರೆ ಕಟ್ಟಡಗಳ ಕಾಮಗಾರಿಗಳು ಕಂಡು ಬಂದರೆ ಅಂತಹ ಕಟ್ಟಡ ಕಾಮಗಾರಿಗಳನ್ನು ತಕ್ಷಣವೇ ನಿಲ್ಲಿಸಲು ಗ್ರಾಮ ಪಂಚಾಯತಿಯು ಕ್ರಮ ಕೈಗೊಳ್ಳಬೇಕು. ಪರವಾನಿಗೆ ಪಡೆದು ನಿರ್ಮಿಸುತ್ತಿರುವ ಕಟ್ಟಡವು ಅನುಮೋದಿತ ನಕ್ಷೆಗಿಂತ ಭಿನ್ನವಾಗಿದ್ದರೆ ಅದನ್ನು ಸರಿಪಡಿಸಲು ನೋಟೀಸ್ ನೀಡಬೇಕು ಹಾಗೂ ಅಂತಹ ಸಲಹೆಯಂತೆ ಕಟ್ಟಡವನ್ನು ನಿರ್ಮಿಸುತ್ತಿರುವುದನ್ನು ಖಾತರಿಪಡಿಸಿಕೊಳ್ಳಬೇಕು.
2. ಅನಧಿಕೃತ ಕಟ್ಟಡಗಳನ್ನು ನೆಲಸಮಗೊಳಿಸಲು ಗ್ರಾಮ ಪಂಚಾಯಿತಿ ನಿಯಮಾನುಸಾರ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕು. ಇಂತಹ ಪ್ರಕ್ರಿಯೆಯಲ್ಲಿ ಸ್ಥಳೀಯ ಕಂದಾಯ ಇಲಾಖೆ, ಪೋಲೀಸರ ನೆರವನ್ನು ಪಡೆಯತಕ್ಕದ್ದು. ಇಂತಹ ಪ್ರಕ್ರಿಯೆಗಳಲ್ಲಿ ಸಂಬಂಧಪಟ್ಟ ಎಲ್ಲಾ ಇಲಾಖೆಗಳು ಸ್ಥಳೀಯ ಗ್ರಾಮ ಪಂಚಾಯತಿಗೆ ಎಲ್ಲಾ ರೀತಿಯ ಸಹಕಾರ ನೀಡುವುದು ಕಡ್ಡಾಯವಾಗಿರುತ್ತದೆ. ಇಂತಹ ಪ್ರಕ್ರಿಯೆಗಳಲ್ಲಿ ಸಹಕರಿಸದಿದ್ದಲ್ಲಿ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲಾಗುವುದು.

3. ಕಟ್ಟಡ ನಿರ್ಮಾಣದ ಪರವಾನಿಗೆ ನೀಡುವ ಸಂದರ್ಭದಲ್ಲಿ, ಸಂಬಂಧಿಸಿದ ಪ್ರಾಧಿಕಾರಗಳಿಂದ ಕಟ್ಟಡ ಪೂರ್ಣಗೊಂಡ ಪತ್ರ/ವಾಸಯೋಗ್ಯ ಪ್ರಮಾಣ ಪತ್ರಗಳನ್ನು ಪಡೆದು ಕಟ್ಟಡದ ಸ್ವಾಧೀನವನ್ನು ಮಾಲೀಕರು/ಫಲಾನುಭವಿಗಳಿಗೆ ವಹಿಸಲಾಗುವ, ಪಡೆಯುವ ಅಥವಾ ಹಸ್ತಾಂತರಿಸಲಾಗುವುದೆಂದು ಲಿಖಿತ ಮುಚ್ಚಳಿಕೆಯನ್ನು ಅರ್ಜಿದಾರರಿಂದ ಪಡೆಯತಕ್ಕದ್ದು.

4. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಕಟ್ಟಡದ ಅನುಮೋದಿತ ನಕ್ಷೆಯನ್ನು ಕಟ್ಟಡ ನಿರ್ಮಾಣದ ಅಂತಿಮ ಹಂತದವರೆಗೆ ಪ್ರದರ್ಶಿಸಬೇಕು.

5. ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹಾಗೂ ಸಂಬಂಧಿಸಿದ ಸ್ಥಳೀಯ ಯೋಜನಾ ಪ್ರಾಧಿಕಾರದ ಅಧಿಕಾರಿಗಳು ನಿಯಮಿತವಾಗಿ ಕಟ್ಟಡ ನಿರ್ಮಾಣ ಸ್ಥಳಕ್ಕೆ ಭೇಟಿ ನೀಡಿ ತಪಾಸಣೆ ನಡೆಸಿ ನಿಯಮ ಪಾಲನೆಯಾಗುತ್ತಿವೆಯೇ, ಉಲ್ಲಂಘನೆಯಾಗುತ್ತಿದೆಯೇ ಎಂಬುದನ್ನು ಪರಿಶೀಲಿಸಬೇಕು. ಒಂದು ವೇಳೆ ಉಲ್ಲಂಘನೆ ಕಂಡು ಬಂದರೆ ಅದನ್ನು ಸರಿಪಡಿಸುವಂತೆ ಲಿಖಿತ ನೋಟೀಸನ್ನು ಜಾರಿಗೊಳಿಸಬೇಕು. ಲಿಖಿತ ನೋಟೀಸ್ ನಂತರವೂ ಕ್ರಮ ವಹಿಸದಿದ್ದರೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣಗಳಂತೆ ಹಾಗೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಕಟ್ಟಡಗಳ ನಿರ್ಮಾಣದ ಮೇಲೆ ಜಿಲ್ಲಾ ಪಂಚಾಯತ್‌ಗಳ, ತಾಲ್ಲೂಕು ಪಂಚಾಯತ್‌ಗಳ ಮತ್ತು ಗ್ರಾಮ ಪಂಚಾಯತ್‌ಗಳ ನಿಯಂತ್ರಣ) ಮಾದರಿ ಉಪವಿಧಿ 2015 ರಂತೆ ಕ್ರಮ ವಹಿಸುವುದು.

6. ಕಟ್ಟಡವು ನಿಯಮಾನುಸಾರ ಪೂರ್ಣಗೊಂಡಿರುವ ಬಗ್ಗೆ ಉಲ್ಲೇಖ (4) ರಲ್ಲಿ ವಿವರಿಸಿರುವಂತೆ ಸಂಬಂಧಪಟ್ಟ ಮಾಲೀಕರು ಗ್ರಾಮ ಪಂಚಾಯತಿಗೆ ಮನವಿ ಪತ್ರ ಸಲ್ಲಿಸಿದ ನಂತರ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹಾಗೂ ಸಂಬಂಧಿಸಿದ ಸ್ಥಳೀಯ ಯೋಜನಾ ಪ್ರಾಧಿಕಾರದ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಸಮಗ್ರವಾಗಿ ಪರಿಶೀಲಿಸಿದ ನಂತರವೇ ವಾಸ ಯೋಗ್ಯ ಪ್ರಮಾಣ ಪತ್ರಗಳನ್ನು ನಿಯಮಾನುಸಾರ ವಿತರಿಸಬೇಕು.

7. ಪೂರ್ಣಗೊಂಡ ಪ್ರಮಾಣ ಪತ್ರ ನೀಡಿದ ನಂತರವೂ ನಕ್ಷೆಯನ್ನು ಉಲ್ಲಂಘನೆ ಮಾಡಿ ನಿರ್ಮಿಸಿರುವುದು ಕಂಡು ಬಂದರೆ, ಅಂತಹ ಕಟ್ಟಡ ಮಾಲೀಕರ, ಸಂಬಂಧಪಟ್ಟ ಅಧಿಕಾರಿ ಮತ್ತು ಅಂತಹ ಕಟ್ಟಡಗಳಿಗೆ 'ಪೂರ್ಣಗೊಂಡ ಪ್ರಮಾಣ ಪತ್ರ ' ನೀಡಿರುವ ವಾಸ್ತುಶಿಲ್ಪಿ/ಇಂಜಿನಿಯರ್ /ಮೇಲ್ವಿಚಾರಕ (ಸಿವಿಲ್ ಡಿಪ್ಲೋಮೊ ಹೊಂದಿರುವವರು) ರ ವಿರುದ್ಧ ಕ್ರಮ ವಹಿಸತಕ್ಕದ್ದು. ಅನಧಿಕೃತ ಕಟ್ಟಡದ ಸಂಬಂಧ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶ ಹಾಗೂ ನಿಯಮಗಳನ್ವಯ ಕ್ರಮವಹಿಸತಕ್ಕದ್ದು.

8. ಅಕ್ರಮವಾಗಿ ನಿರ್ಮಿಸಿರುವ ಕಟ್ಟಡಗಳಲ್ಲಿ ವ್ಯಾಪಾರ, ವಾಣಿಜ್ಯ ವಹಿವಾಟು ನಡೆಸಲು ಅನುಮತಿ / ಲೈಸೆನ್ಸ್ ನೀಡಬಾರದು.

9. ಕಟ್ಟಡ ನಿರ್ಮಾಣ ವಲಯ ಯೋಜನೆ (Zonal Plan) ಅನುಗುಣವಾಗಿರಬೇಕು. ಒಂದು ವೇಳೆ ಯೋಜನೆಯನ್ನು ಬದಲಾವಣೆ ಮಾಡಬೇಕಾದರೂ ನಿಯಮಬದ್ಧವಾಗಿ ಬದಲಾವಣೆ ಆಗಬೇಕಾಗಿರುತ್ತದೆ.

10. ಅನಧಿಕೃತ ಕಟ್ಟಡಗಳ ನಿರ್ಮಾಣ ತಿಳಿದಿದ್ದರೂ ಅದರ ವಿರುದ್ಧ ಕ್ರಮ ಕೈಗೊಳ್ಳದ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸುವುದು.

11. ಬಿಲ್ಡರ್ ಅಥವಾ ಮಾಲೀಕರು ಕಟ್ಟಡ ಪೂರ್ಣಗೊಂಡ ಹಾಗೂ ವಾಸ ಯೋಗ್ಯ ಪ್ರಮಾಣ ಪತ್ರಗಳನ್ನು (ಸಿ.ಸಿ ಮತ್ತು ಓ.ಸಿ) ನೀಡಲಿಲ್ಲವೆಂದು ಗ್ರಾಮ ಪಂಚಾಯಿತಿಯ ವಿರುದ್ಧ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗೆ ಅರ್ಜಿ ಸಲ್ಲಿಸುವುದು, ಸದರಿ ಅರ್ಜಿಯನ್ನು 90 ದಿನಗಳೊಳಗೆ ನಿಯಮಾನುಸಾರ ಪರಿಶೀಲಿಸಿ ಇತ್ಯರ್ಥಪಡಿಸಬೇಕು.

12. ಅನಧಿಕೃತ ಕಟ್ಟಡಗಳ ಸಂಬಂಧ ನ್ಯಾಯಾಲಯಗಳು ನೀಡುವ ಎಲ್ಲಾ ಆದೇಶ, ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಮಾನ್ಯ ಸರ್ವೋಚ್ಚ ನ್ಯಾಯಾಲಯವು ರಿಟ್ ಅರ್ಜಿ (ಸಿವಿಲ್) ಸಂಖ್ಯೆ:295/2022 ರ ಪ್ರಕರಣದಲ್ಲಿ ದಿನಾಂಕ:13-11-2024 ರಂದು ನೀಡಿರುವ ಆದೇಶದಲ್ಲಿ ವಿವರಿಸಿರುವ ಅಂಶಗಳಂತೆ ಕ್ರಮ ವಹಿಸತಕ್ಕದ್ದು.

13. ಎಲ್ಲಾ ಅಗತ್ಯ ಸೇವಾ ಸಂಪರ್ಕಗಳಾದ ವಿದ್ಯುತ್, ನೀರು ಸರಬರಾಜು, ಒಳಚರಂಡಿ ಸಂಪರ್ಕ ಇತ್ಯಾದಿಗಳನ್ನು ಸೇವಾ ಪೂರೈಕೆದಾರ/ ಮಂಡಳಿಯು ಕಟ್ಟಡಗಳಿಗೆ ಪೂರ್ಣಗೊಂಡ / ವಾಸಯೋಗ್ಯ ಪ್ರಮಾಣ ಪತ್ರಗಳನ್ನು ಸಲ್ಲಿಸಿದ ನಂತರ ಮಾತ್ರ ನೀಡಬೇಕು.

14. ಬ್ಯಾಂಕುಗಳು / ಹಣಕಾಸು ಸಂಸ್ಥೆಗಳು ಯಾವುದೇ ಕಟ್ಟಡದ ವಿರುದ್ಧ ಸಾಲಗಳನ್ನು ಅಥವಾ ಯಾವುದೇ ರೀತಿಯ ಹಣಕಾಸಿನ ನೆರವನ್ನು ಮಂಜೂರು ಮಾಡುವ ಮುನ್ನ ಅಂತಹ ಕಟ್ಟಡಕ್ಕೆ ನೀಡಲಾದ ಕಟ್ಟಡ ಪೂರ್ಣಗೊಂಡ ಪ್ರಮಾಣ ಪತ್ರ ಹಾಗೂ ವಾಸಯೋಗ್ಯ ಪ್ರಮಾಣ ಪತ್ರಗಳನ್ನು ಪರಿಶೀಲನೆಗೆ ಒಳಪಡಿಸುವುದು.

15. ಗ್ರಾಮ ಪಂಚಾಯಿತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯಿತಿ ಸಿಬ್ಬಂದಿಗಳನ್ನು, ಅಂದರೆ ವಾಟರ್ ಆಪರೇಟರ್/ಬಿಲ್ ಕಲೆಕ್ಟರ್ ಹಾಗೂ ಇತರೆ ಸಿಬ್ಬಂದಿಗಳನ್ನು ಗ್ರಾಮವಾರು ನಿಯೋಜಿಸಿ, ಅವರಿಂದ ನಿಯಮಿತವಾಗಿ ಲೈಸೆನ್ಸ್ ಇಲ್ಲದೆ ಯಾವುದೇ ಕಟ್ಟಡ ನಿರ್ಮಾಣವಾಗುತ್ತಿಲ್ಲವೆಂದು ದೃಢೀಕರಣವನ್ನು ಪಡೆಯತಕ್ಕದ್ದು.

16. ಸಿಬ್ಬಂದಿಗಳು ಲೈಸೆನ್ಸ್ ಇಲ್ಲದೆ ಕಟ್ಟಡ ನಿರ್ಮಾಣ ಮಾಡುತ್ತಿರುವ ಬಗ್ಗೆ ವರದಿ ನೀಡಿದರೆ, ತಕ್ಷಣವೇ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದ ಪ್ರಕಾರ ಕ್ರಮ ವಹಿಸತಕ್ಕದ್ದು.

4. ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತಿಗಳ ಅಧಿಕಾರಿಗಳು ಈ ಸಂಬಂಧವಾಗಿ ಮಾಸಿಕ ತಪಾಸಣೆ ನಡೆಸುವುದು ಹಾಗೂ ಅಕ್ರಮ ಕಟ್ಟಡಗಳ ಬಗ್ಗೆ ಮಾಹಿತಿ ಮತ್ತು ಅಂಕಿ ಅಂಶಗಳನ್ನು ಪರಿಶೀಲಿಸಿ ಗ್ರಾಮ ಪಂಚಾಯತಿಗೆ ಸೂಕ್ತ ಆದೇಶ ನೀಡುವುದು.

ಮೇಲ್ಕಂಡಂತೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಹಾಗೂ ನಿಯಮಗಳನ್ನು ಉಲ್ಲಂಘಿಸಿ ನಿರ್ಮಿಸುತ್ತಿರುವ ಕಟ್ಟಡಗಳನ್ನು ನಿರ್ಬಂಧಿಸಲು ಹಾಗೂ ಸಾರ್ವಜನಿಕ ಸ್ವತ್ತುಗಳಾದ ಸರ್ಕಾರ /ಸಾರ್ವಜನಿಕ ಸ್ವತ್ತಿನಲ್ಲಿ ಹಾಗೂ ಕೆರೆ, ಕುಂಟೆ, ಕಾಲುವೆ ಮತ್ತಿತರ ಸಾರ್ವಜನಿಕ ಹಿತಾಸಕ್ತಿಯುಳ್ಳ ಸ್ವತ್ತಿನಲ್ಲಿ ಕಟ್ಟಡಗಳು ನಿರ್ಮಾಣವಾಗಿದ್ದರೆ ಅವುಗಳನ್ನು ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶ ಹಾಗೂ ಮಾರ್ಗಸೂಚಿಗಳನ್ವಯ ನೆಲ ಸಮಗೊಳಿಸಬೇಕೆಂದು ಈ ಮೂಲಕ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತಿಗಳಿಗೆ ಸೂಚಿಸಲಾಗಿದೆ.

(ಡಾ|| ಎನ್. [illegible])
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
12/5/25

**ಇವರಿಗೆ:**

1. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ.ರಸ್ತೆ, ಬೆಂಗಳೂರು.
2. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
3. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು.
4. ಎಲ್ಲಾ ಉಪ ಕಾರ್ಯದರ್ಶಿಗಳು (ಅಭಿವೃದ್ಧಿ), ಜಿಲ್ಲಾ ಪಂಚಾಯತ್‌ಗಳು.
5. ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು .
6. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ.
2. ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಇಂಧನ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
7. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಕೇಂದ್ರ ಕಛೇರಿ, ಬೆಂಗಳೂರು.
8. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

ಅನುಬಂಧ-3

## ಕರ್ನಾಟಕ ಸರ್ಕಾರ

ಸಂಖ್ಯೆ: ನಅಇ 136 ಬಿಎಂಆರ್ 2024

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:05-08-2024

### ಸುತ್ತೋಲೆ

**ವಿಷಯ:** ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಕಟ್ಟಡಗಳ ನಿರ್ಮಾಣಗಳಿಗೆ ಸ್ವಾಧೀನ ಪ್ರಮಾಣ ಪತ್ರ (Occupancy Certificate) ವಿತರಣೆ ಮಾಡುವ ಬಗ್ಗೆ.

**ಉಲ್ಲೇಖ:**
1. ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ಸುತ್ತೋಲೆ ಸಂಖ್ಯೆ: ಕಪಂರಾಆ/ ಅಭಿವೃದ್ಧಿ/131/2024 ದಿನಾಂಕ: 12.03.2024.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 788 ಗ್ರಾಪಂಅ 2014 ದಿ:08.05.2015
3. ದಿನಾಂಕ 24.06.2024 ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ

******

ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ:26194/2023 ರಲ್ಲಿ ನೀಡಿರುವ ನಿರ್ದೇಶನದನ್ವಯ ಉಲ್ಲೇಖ(2) ರಲ್ಲಿ ಹೊರಡಿಸಲಾಗಿರುವ ಸುತ್ತೋಲೆಯಲ್ಲಿನ ಅಂಶಗಳನ್ನು ಪುನರುಚ್ಚರಿಸಿ ಮುಂದುವರೆಸುತ್ತಾ, ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ನಿರ್ಮಿಸಲಾಗುವ ಕಟ್ಟಡಗಳಿಗೆ ಅಥವಾ ಅಸ್ತಿತ್ವದಲ್ಲಿನ ಕಟ್ಟಡಗಳ ಬದಲಾವಣೆಗಳಿಗೆ ಸಂಬಂಧಿಸಿದಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 64 ರನ್ವಯ ಅನುಮತಿ ಪಡೆಯುವುದು ಕಡ್ಡಾಯವಾಗಿದ್ದು, ಇದನ್ನು ಉಲ್ಲಂಘಿಸಿದಲ್ಲಿ ಅಧಿನಿಯಮದ ಪ್ರಕರಣ 298 ರನ್ವಯ ಕ್ರಮ ವಹಿಸಲು ಸೂಚಿಸಲಾಗಿರುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಕಟ್ಟಡಗಳ ನಿರ್ಮಾಣದ ಮೇಲೆ ಜಿಲ್ಲಾ ಪಂಚಾಯತ್‌ಗಳ, ತಾಲ್ಲೂಕು ಪಂಚಾಯತ್‌ಗಳ ಮತ್ತು ಗ್ರಾಮ ಪಂಚಾಯತ್‌ಗಳ ನಿಯಂತ್ರಣ) ಮಾದರಿ ಉಪವಿಧಿಗಳು, 2015 ರ 13 ನೇ ಉಪವಿಧಿಯಲ್ಲಿ ಅಧಿಭೋಗದಾರಿಕೆ ಪ್ರಮಾಣ ಪತ್ರ ವಿತರಣೆಯ ಬಗ್ಗೆ ತಿಳಿಸಲಾಗಿದ್ದು, ಉಪವಿಧಿಗಳನ್ನು ಉಲ್ಲಂಘಿಸುವ ಸಂಬಂಧ 14 ರ ಉಪವಿಧಿಯಲ್ಲಿ ಕ್ರಮವಹಿಸುವ ಬಗ್ಗೆ ತಿಳಿಸಲಾಗಿರುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 64 (5-ಎ) ರಲ್ಲಿ ಗ್ರಾಮ ಪಂಚಾಯತ್‌ಗಳು ಕಟ್ಟಡದ ಲೈಸೆನ್ಸ್ ನೀಡುವ ವಿಷಯದಲ್ಲಿ ನಗರ ಮತ್ತು ಗ್ರಾಮಾಂತರ ಯೋಜನೆ ಅಧಿನಿಯಮ, 1961 ರ ಉಪಬಂಧಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು. ಸದರಿ ಉಪಬಂಧಗಳ ಉಲ್ಲಂಘನೆಯನ್ನು "ದುರ್ನಡತೆ" ಯೆಂದು ಅರ್ಥೈಸಿ ಸಂಬಂಧಪಟ್ಟ ಅಧಿಕಾರಿ ಅಥವಾ ಸಿಬ್ಬಂದಿಯನ್ನು ಶಿಸ್ತು ಕ್ರಮಕ್ಕೆ ಹೊಣೆಗಾರರಾಗುವ ಬಗ್ಗೆ ತಿಳಿಸಲಾಗಿರುತ್ತದೆ.

ಗ್ರಾಮ ಪಂಚಾಯಿತಿಗಳು, ಯೋಜನಾ ಪ್ರದೇಶದ ವ್ಯಾಪ್ತಿಯೊಳಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ, 1961 ರ ಪ್ರಕರಣ 15 (1) ರಂತೆ ಯೋಜನಾ ಪ್ರಾಧಿಕಾರಗಳಿಂದ ಕಟ್ಟಡಗಳ ನಿರ್ಮಾಣಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ

ಪಡೆಯತಕ್ಕದ್ದು. ಸದರಿ ಪ್ರಮಾಣ ಪತ್ರ ಪಡೆಯದ ಯಾವುದೇ ಕಾಮಗಾರಿಯನ್ನು, ಸಾರ್ವಜನಿಕ ಅಥವಾ ಅದರ ಯಾವುದೇ ಬಳಕೆಯನ್ನು ಮಾಡದಂತೆ ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ತಿಳಿಸಲಾಗಿರುತ್ತದೆ.

ಕಟ್ಟಡ ನಿರ್ಮಾಣ ಪೂರ್ಣಗೊಂಡ ನಂತರದ ಅವಧಿಯಲ್ಲಿ ಒಂದು ತಿಂಗಳೊಳಗೆ ಕಟ್ಟಡ ಪೂರ್ಣಗೊಂಡ ಬಗ್ಗೆ ನಿಗದಿತ ನಮೂನೆಯಲ್ಲಿ ಗ್ರಾಮ ಪಂಚಾಯಿತಿಗೆ ಅರ್ಜಿಯನ್ನು ಸಲ್ಲಿಸುವ ಮೂಲಕ ಸ್ವಾಧೀನ/ ಅಧಿಭೋಗದಾರಿಕೆ ಪ್ರಮಾಣ ಪತ್ರ (Occupancy Certificate) ವನ್ನು ಗ್ರಾಮ ಪಂಚಾಯಿತಿಯಿಂದ ಪಡೆಯಬೇಕಿರುತ್ತದೆ.

ಆದ್ದರಿಂದ, ಮೇಲ್ಕಂಡ ಕಾಯ್ದೆಗಳು ಮತ್ತು ಉಪ ವಿಧಿಗಳ ಅನ್ವಯ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ನಿರ್ಮಿಸಲಾಗುವ ಕಟ್ಟಡಗಳಿಗೆ ಅಥವಾ ಅಸ್ತಿತ್ವದಲ್ಲಿನ ಕಟ್ಟಡಗಳ ಬದಲಾವಣೆಗಳಿಗೆ ಸಂಬಂಧಿಸಿದಂತೆ ಕಾಮಗಾರಿಯು ಪೂರ್ಣಗೊಂಡ ನಂತರ ಪ್ರಾಧಿಕಾರಕ್ಕೆ ಅರ್ಹನಾದ ವಾಸ್ತುಶಿಲ್ಪಿ /ಪಟ್ಟಿಯಲ್ಲಿನ (Empanelled) ಇಂಜಿನಿಯರ್/ ಮೇಲ್ವಿಚಾರಕರಿಂದ ಕಟ್ಟಡ ಪೂರ್ಣಗೊಂಡ ಪ್ರಮಾಣ ಪತ್ರವನ್ನು ಪಡೆದ ನಂತರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯು ಸ್ವಾಧೀನ/ಅಧಿಭೋಗದಾರಿಕೆ ಪ್ರಮಾಣ ಪತ್ರ ವಿತರಣೆಗೆ ಪೂರ್ವದಲ್ಲಿ ಪ್ರಾರಂಭಿಕ ಪ್ರಮಾಣ ಪತ್ರ ಮತ್ತು ಗ್ರಾಮ ಪಂಚಾಯಿತಿಯಿಂದ ವಿತರಣೆ ಮಾಡಲಾದ ಲೈಸೆನ್ಸ್, ಅನುಮೋದಿಸಲಾದ ಕಟ್ಟಡ ನಕ್ಷೆ ಹಾಗೂ ಅಂದಾಜು ಪಟ್ಟಿಗಳಂತೆ ಕಟ್ಟಡ ನಿರ್ಮಾಣವಾಗಿರುವ ಬಗ್ಗೆ ಸಂಬಂಧಿಸಿದ ಪ್ರಾಧಿಕಾರಗಳೊಂದಿಗೆ ಜಂಟಿಯಾಗಿ ಪರಿಶೀಲಿಸಿ, ಸಂಬಂಧಿಸಿದ ಯೋಜನಾ ಪ್ರಾಧಿಕಾರದಿಂದ ಅನುಮೋದಿತ ನಕ್ಷೆಯನುಸಾರ ಕಾಮಗಾರಿ/ಕಟ್ಟಡ ಪೂರ್ಣವಾಗಿರುವ ಬಗ್ಗೆ ಕಡ್ಡಾಯವಾಗಿ ತಾಂತ್ರಿಕ ಅಭಿಪ್ರಾಯವನ್ನು ಪಡೆದು, ಸದರಿ ನಿರ್ಮಾಣವು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಕಟ್ಟಡಗಳ ನಿರ್ಮಾಣದ ಮೇಲೆ ಜಿಲ್ಲಾ ಪಂಚಾಯತ್‌ಗಳ, ತಾಲ್ಲೂಕು ಪಂಚಾಯತ್‌ಗಳ ಮತ್ತು ಗ್ರಾಮ ಪಂಚಾಯತ್‌ಗಳ ನಿಯಂತ್ರಣ) ಮಾದರಿ ಉಪ ವಿಧಿಗಳು, 2015 ಹಾಗೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 64 (5-ಎ) ರಲ್ಲಿನ ಷರತ್ತುಗಳನ್ವಯ ದೃಢೀಕರಿಸಿಕೊಂಡ ನಂತರವಷ್ಟೇ ಸ್ವಾಧೀನ/ಅಧಿಭೋಗದಾರಿಕೆ ಪ್ರಮಾಣ ಪತ್ರವನ್ನು ನಿಗದಿತ ನಮೂನೆಯಲ್ಲಿ ಪೂರ್ಣ ವಿವರಗಳೊಂದಿಗೆ ಸಂಬಂಧಿಸಿದ ಅಧಿಭೋಗದಾರರಿಗೆ ವಿತರಿಸಲು ಕ್ರಮವಹಿಸತಕ್ಕದ್ದು.

ಮೇಲ್ಕಂಡ ಸುತ್ತೋಲೆಯಲ್ಲಿನ ನಿರ್ದೇಶನಗಳನ್ನು ಉಲ್ಲಂಘಿಸಿ ಗ್ರಾಮ ಪಂಚಾಯಿತಿಗಳು ಸ್ವಾಧೀನ/ವಾಸಯೋಗ್ಯ/ಅಧಿಭೋಗದಾರಿಕೆ ಪ್ರಮಾಣ ಪತ್ರ ವಿತರಣೆ ಮಾಡಿದ್ದಲ್ಲಿ ಸಂಬಂಧಿಸಿದವರ ವಿರುದ್ಧ ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದೆಂದು ಸಹ ತಿಳಿಸಿದೆ.

| | |
|---|---|
| (ಎಸ್.ಆರ್. ಉಮಾಶಂಕರ್) | (ಅಂಜುಮ್ ಪರ್ವೇಜ್) |
| ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂ.ರಾಜ್) |
| ನಗರಾಭಿವೃದ್ಧಿ ಇಲಾಖೆ | ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ. |

ಇವರಿಗೆ,

1. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
2. ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು
3. ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಮತ್ತು ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು

5. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಎಲ್ಲಾ ಜಿಲ್ಲಾ ಪಂಚಾಯತ್‌ಗಳು.
7. ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯತ್‌ಗಳು. (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)
8. ಎಲ್ಲಾ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು. (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)

**ಪ್ರತಿಯನ್ನು ಮಾಹಿತಿಗಾಗಿ,**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿರವರಿಗೆ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ರವರ ಆಪ್ತ ಕಾರ್ಯದರ್ಶಿರವರಿಗೆ.
3. ಸಂಪಾದಕರು, ಕರ್ನಾಟಕ ವಿಕಾಸ/ವೆಬ್ ಸೈಟ್ ಪ್ರಕಟಣೆಗಾಗಿ.
4. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ

ಕರ್ನಾಟಕ ಸರ್ಕಾರ
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ
ಕಾಳಿದಾಸ ಮಾರ್ಗ, ಗಾಂಧಿನಗರ, ಬೆಂಗಳೂರು – 560 009

ಸಂಖ್ಯೆ: ಕಪಂರಾಆ/ಅಭಿವೃದ್ಧಿ/9/2025

ದಿನಾಂಕ: 23.05.2025

ರವರಿಗೆ,

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು

ಮಾನ್ಯರೇ,

ವಿಷಯ:- ಎಸ್ಕಾಂ ಗಳಿಂದ ವಿದ್ಯುತ್ ಸಂಪರ್ಕ ನೀಡಲು ಬಾಕಿ ಇರುವ ಅರ್ಜಿಗಳಿಗೆ ವಾಸಯೋಗ್ಯ (Occupancy Certificate) ಪ್ರಮಾಣ ಪತ್ರಗಳನ್ನು ಒದಗಿಸುವ ಬಗ್ಗೆ.

ಉಲ್ಲೇಖ:-
1. ಮಾನ್ಯ ಸರ್ವೋಚ್ಚ ನ್ಯಾಯಾಲಯ ಸಿವಿಲ್ ಅಪೀಲ್ ಸಂ: 14604/2024ಗೆ ಸಂಬಂಧಿಸಿದಂತೆ 17.12.2024 ರ ಆದೇಶದಂತೆ ಕ್ರಮ ವಹಿಸುವ ಕುರಿತು ದಿನಾಂಕ: 13.05.2025 ರಂದು ಮಾನ್ಯ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ಸಭಾ ನಡವಳಿಗಳು.
2. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸುತ್ತೋಲೆ ಸಂಖ್ಯೆ: RDPR/27/GPA/2025 ದಿನಾಂಕ: 13.05.2025.
3. ಈ ಕಾರ್ಯಾಲಯದ ಸುತ್ತೋಲೆ ಸಂಖ್ಯೆ: ಕಪಂರಾಆ/ಅಭಿವೃದ್ಧಿ/131/2024 ದಿನಾಂಕ: 12.03.2024.
4. ನಗರಾಭಿವೃದ್ಧಿ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಜಂಟಿ ಸುತ್ತೋಲೆ ಸಂಖ್ಯೆ: ನಅಇ 136 ಬಿಎಂಆರ್ 2024 ದಿನಾಂಕ: 05.08.2024

----****----

ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ-1 ರ ನಡವಳಿಯಂತೆ ರಾಜ್ಯದ ಎಲ್ಲಾ ಎಸ್ಕಾಂಗಳಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿದ್ಯುತ್ ಸಂಪರ್ಕ ಪಡೆಯಲು ಸಾರ್ವಜನಿಕರಿಂದ ಸಲ್ಲಿಸಲಾದ ಅರ್ಜಿಗಳಲ್ಲಿ ವಿದ್ಯುತ್ ಸಂಪರ್ಕ ನೀಡಲು ಬಾಕಿ ಇರುವ ಅರ್ಜಿಗಳನ್ನು ಇಂಧನ ಇಲಾಖೆಯಿಂದ ಈ ಕಾರ್ಯಾಲಯಕ್ಕೆ ಸೂಕ್ತ ಕ್ರಮಕ್ಕಾಗಿ ರವಾನಿಸಿರುತ್ತಾರೆ.

ಉಲ್ಲೇಖ-2 ರಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಪ್ರಕರಣ ಸಂಖ್ಯೆ 14604/2024 ರ ಆದೇಶದ ಹಿನ್ನಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಕಟ್ಟಡಗಳಿಗೆ ಪೂರ್ಣಗೊಂಡ ಪತ್ರ / ವಾಸಯೋಗ್ಯ ಪ್ರಮಾಣ ಪತ್ರಗಳನ್ನು ನೀಡುವ ಬಗ್ಗೆ ವಹಿಸಬೇಕಾದ ಕ್ರಮಗಳ ಬಗ್ಗೆ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ.

ಉಲ್ಲೇಖ- 3 & 4 ರಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಕಟ್ಟಡಗಳ ನಿರ್ಮಾಣದ ನಂತರ ವಾಸಯೋಗ್ಯ ಪ್ರಮಾಣ ಪತ್ರ (Occupancy Certificate) ವಿತರಣೆ ಮಾಡುವ ಬಗ್ಗೆ ವಿವರವಾಗಿ ಸುತ್ತೋಲೆಗಳನ್ನು ಹೊರಡಿಸಲಾಗಿರುತ್ತದೆ.

ಅದರಂತೆ, ಇಂಧನ ಇಲಾಖೆಯಿಂದ ಪಡೆದ ಎಲ್ಲಾ ಎಸ್ಕಾಂಗಳಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿದ್ಯುತ್ ಸಂಪರ್ಕ ಪಡೆಯಲು ಸಾರ್ವಜನಿಕರಿಂದ ಸಲ್ಲಿಸಲಾದ ಅರ್ಜಿಗಳಲ್ಲಿ ವಿದ್ಯುತ್ ಸಂಪರ್ಕ ನೀಡಲು ಬಾಕಿ ಇರುವ ಅರ್ಜಿಗಳ ಮಾಹಿತಿಯನ್ನು ಜಿಲ್ಲಾವಾರು ಪ್ರತ್ಯೇಕವಾಗಿ ಲಗತ್ತಿಸಿದೆ.

ವಿದ್ಯುತ್ ಸಂಪರ್ಕ ನೀಡಲು ಬಾಕಿ ಇರುವ ಅರ್ಜಿಗಳ ಬಗ್ಗೆ ಪರಿಶೀಲಿಸಿ, ಕಟ್ಟಡಗಳ ಉಪಬಂಧಗಳ ಅನ್ವಯ ನಿರ್ಮಿಸಲಾಗಿರುವ ಕಟ್ಟಡಗಳಿಗೆ ಉಲ್ಲೇಖ -2, 3 & 4 ರಲ್ಲಿ ತಿಳಿಸಿರುವಂತೆ ನಿಯಮಾನುಸಾರ ಆನ್ ಲೈನ್ ಮೂಲಕ ವಾಸಯೋಗ್ಯ (Occupancy Certificate) ಪ್ರಮಾಣ ಪತ್ರಗಳನ್ನು 07 ದಿನಗಳೊಳಗಾಗಿ ಒದಗಿಸಲು ಸೂಚಿಸಿದೆ.

**ಅಡಕಗಳು**: ಜಿಲ್ಲಾವಾರು ಮಾಹಿತಿ (Excel Sheet Through E mail)

ತಮ್ಮ ವಿಶ್ವಾಸಿ

ಅರುಂಧತಿ

ಆಯುಕ್ತರು

ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ

ಬೆಂಗಳೂರು

**ಪ್ರತಿಯನ್ನು,**

1. ಸರ್ಕಾರದ ಮಾನ್ಯ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು. ರವರಿಗೆ ಮಾಹಿತಿಗಾಗಿ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್)ಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಯವರಿಗೆ ಮಾಹಿತಿಗಾಗಿ
3. ಕಚೇರಿ ರಕ್ಷಾ ಕಡತಕ್ಕೆ